**ಓ.ಎಸ್.ನಂಃ 340/2023**
**ಪಿಡಬ್ಲ್ಯೂ-1**

**ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 20.09.2025 ರಂದು ಪ್ರಮಾಣಿಕರಿಸಲಾಯಿತು.**
**ಪಾಟೀ ಸವಾಲು: ಪ್ರತಿವಾದಿ ಪರ ವಕೀಲರಿಂದಃ**

ನಾನು ಚಿಕ್ಕಾಟಿ ಗ್ರಾಮದ ನಿವಾಸಿ. ದಾವ ಸ್ವತ್ತು ನನಗೆ ಸರ್ಕಾರದಿಂದ ಮಂಜೂರಾಗಿದೆ. ಸರ್ಕಾರದವರು ನನಗೆ ಹಕ್ಕು ಪತ್ರ ನೀಡಿದ್ದಾರೆ. ಸದರಿ ಹಕ್ಕು ಪತ್ರವನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಹಕ್ಕು ಪತ್ರದಂತೆ ನನಗೆ ಖಾತಾ ಆಗಿದೆ. ಸದರಿ ಖಾತಾವನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ದಾವ ಸ್ವತ್ತಿಗೆ ಕಂದಾಯ ಪಾವತಿ ಮಾಡಿದ್ದೇನೆ. ರಶೀದಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳು ನನ್ನ ಸ್ವಾಧೀನಕ್ಕೆ ತೊಂದರೆ ನೀಡಿದ ಬಗ್ಗೆ ದೂರು ನೀಡಿಲ್ಲ. ಸುಮಾರು 10 ವರ್ಷಗಳ ಹಿಂದೆ ಪ್ರತಿವಾದಿ ಗಲಾಟೆ ಮಾಡಿದರು. ದಾವ ಹೂಡುವ ಮುನ್ನಾ ಯಾವುದೆ ಗಲಾಟೆಯಾಗಿಲ್ಲ. 1ನೇ ಪ್ರತಿವಾದಿಯ ಗಂಡನಿಗೆ ಸರ್ಕಾರದಿಂದ ನಿವೇಶನ ಮಂಜೂರಾಗಿದೆ ಎಂದರೆ ಸರಿ. ದಾವ ಸ್ವತ್ತನ್ನು ಪ್ರತಿವಾದಿಗಳು ತಮ್ಮದು ಎಂದು ಕೇಳುತ್ತಿದ್ದಾರೆ. ಈ ಓ.ಎಸ್.ಸಂ.315/2015 ದಾಖಲಾಗಿತ್ತು ಎಂದರೆ ಸರಿ. ಸದರಿ ದಾವೆ ಪ್ರತಿವಾದಿಗಳ ಪರ ತೀರ್ಪು ಆಗಿದೆ ಎಂದರೆ ಸರಿ. ಅದರ ವಿರುದ್ಧ ಅಪೀಲು ಸಲ್ಲಿಸಿದ್ದೆ.

ಈಗ ಆರ್.ಎಸ್.ಎ.ಸಂ.1694/2023 ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇದೆ ಎಂದರೆ ಸರಿ ಮತ್ತು ಆರ್.ಎಸ್.ಎ. ಸಂ.1702/2023 ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇದೆ ಎಂದರೆ ಸರಿ. ಈ ದಾವೆಯಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಆರ್.ಎಸ್.ಎ ವ್ಯವಹರಣೆಯನ್ನು ನಮೂದು ಮಾಡಲು ತೊಂದರೆ ಇರಲಿಲ್ಲ. ಪ್ರತಿವಾದಿಗಳಿಗೆ ಅಸೆಸ್ಮೆಂಟ್ 608 ರಲ್ಲಿ 30x40 ಅಡಿ ನಿವೇಶನ ಇದೆ ಎಂದರೆ ಸರಿ. ಅದು ಹಿಂದೆ 1ನೇ ಪ್ರತಿವಾದಿಯ ಗಂಡನ ಹೆಸರಿಗೆ ಹಕ್ಕು ಪತ್ರ ಇದೆ ಎಂದರೆ ಸರಿ. ಸುಮಾರು 20 ವರ್ಷಗಳ ಹಿಂದೆ 1ನೇ ಪ್ರತಿವಾದಿಯ ಗಂಡ ಮರಣ ಹೊಂದಿರುತ್ತಾರೆ. ನಂತರ 1ನೇ ಪ್ರತಿವಾದಿಯ ಹೆಸರಿಗೆ ಖಾತಾ ಬದಲಾವಣೆಯಾಗಿದೆ ಎಂದರೆ ನನಗೆ ಗೊತ್ತಿಲ್ಲ. ದಾವ ಸ್ವತ್ತಿಗೆ ನನ್ನ ಬಳಿ ಯಾವುದೆ

ದಾಖಲೆಗಳು ಇಲ್ಲ ಎಂದರೆ ಸರಿಯಲ್ಲ. ನನ್ನ ಹೆಸರಿನಲ್ಲಿ ದಾಖಲೆಗಳು ಇದ್ದರೆ ನ್ಯಾಯಾಲಯಕ್ಕೆ ಹಾಜರುಪಡಿಸುತ್ತಿದ್ದೆ ಎಂದರೆ ಸರಿ. ನನ್ನ ಬಳಿ ದಾಖಲೆಗಳು ಇಲ್ಲದ ಕಾರಣ ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿ. ಪ್ರತಿವಾದಿಗಳಿಗೆ ವಿನಾಕಾರಣ ತೊಂದರೆ ಕೊಡಲು ಸುಳ್ಳು ದಾವೆ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ಗುಂಡ್ಲುಪೇಟೆ